# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1962(2277)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ಅಶುಚಿತ್ವ, ಅಪೌಷ್ಠಿಕತೆ ಮತ್ತು ಅಶುದ್ಧ ಕುಡಿಯುವ ನೀರಿನಿಂದಾಗಿ ಶಿಶುಗಳ ಮರಣ

(ಅ) ಇತ್ತೀಚಿನ ಯು.ಎನ್.ಒ (UNO) ಅಧ್ಯಯನ ವರದಿ ಪ್ರಕಾರ, ಭಾರತದಲ್ಲಿ ಅಶುಚಿತ್ವ, ಅಪೌಷ್ಠಿಕತೆ ಮತ್ತು ಅಶುದ್ಧ ಕುಡಿಯುವ ನೀರಿನಿಂದಾಗಿ ಪ್ರತಿ 2 ನಿಮಿಷಗಳಲ್ಲಿ ಸರಾಸರಿ ಮೂರು ಶಿಶುಗಳು ಮರಣ ಹೊಂದುತ್ತಾರೆ ಎಂದು ವರದಿಯಿದ್ದು, ರಾಜ್ಯದಲ್ಲಿ ಇಂತಹ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಶಿಶುಗಳ ಮರಣ ತಪ್ಪಿಸಲು ರೂಪಿಸಿರುವ ಯೋಜನೆಗಳು ಮತ್ತು ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶಿಶು ಕಲ್ಯಾಣಕ್ಕಾಗಿ ಇತ್ತೀಚಿನ ವರ್ಷಗಳಲ್ಲಿ ಸಂಯೋಜಿತ ಮಕ್ಕಳ ಅಭಿವೃದ್ಧಿ ಯೋಜನೆಗಳಿಗೆ ನೀಡುತ್ತಿರುವ ಅನುದಾನ ಕಡಿಮೆ ಆಗುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಕಾರಣಗಳ ಸಮೇತ ಸಂಪೂರ್ಣ ವಿವರ ನೀಡುವುದು;

(ಇ) ರಾಜ್ಯದಲ್ಲಿ ಅಸಂಖ್ಯಾತ ಶಿಶು ಮರಣಕ್ಕೆ ಅಪೌಷ್ಠಿಕತೆ, ಅಶುಚಿತ್ವ ಮತ್ತು ಅಶುದ್ಧ ಕುಡಿಯುವ ನೀರು ಕಾರಣಗಳೆಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಈ ಕೊರತೆಗಳನ್ನು ನೀಗಿಸಲು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)